ಲೋಕೋಪಯೋಗಿ ಇಲಾಖೆ ಸಚಿವರ ಆದೇಶವಿದ್ದರು ಕೂಡ ಯಾವ ಕಾರಣದಿಂದ ಲೋಕೋಪಯೋಗಿ ಇಲಾಖೆ ಕ್ರಮವನ್ನು ಕೈಗೊಂಡಿರುವುದಿಲ್ಲ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಸೋಮವಾರಪೇಟೆ ತಾಲ್ಲೂಕಿನ ರಸ್ತೆಯಾದ ಬಸವನಕೊಪ್ಪ ಬೀಟಿಕಟ್ಟೆ ರಸ್ತೆಯನ್ನು ಜಿಲ್ಲಾ ಮುಖ್ಯ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಹಾಗೂ ಸೋಮವಾರಪೇಟೆ ತಾಲ್ಲೂಕಿನ ಶನಿವಾರ ಸಂತೆಯಿಂದ ಸಕಲೇಶಪುರ ತಾಲ್ಲೂಕಿನ ಹೊಸೂರು ವರೆಗಿನ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಮೆಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ

376 (644) ಶ್ರೀ ಕೃಷ್ಣಾಪಾಲೇಮಾರ್ ಜೆ (ಸುರತ್ಕಲ್). ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಾರ್ಜುನ ಶಾಖೋತ್ಪನ್ನ ವಿದ್ಯುತ್ ಯೋಜನೆಯ ಅನುಷ್ಠಾನದ ಬಗ್ಗೆ ಸರ್ಕಾರದ ನಿಲುವುಗಳೇನು,

ಆ) ಪರಿಸರಕ್ಕೆ ಮತ್ತು ಜನರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸರ್ಕಾರ ಅನುಸರಿಸಿದ ಕ್ರಮಗಳೇನು,

ಇ) ಪರಿಸರ ತಜ್ಞರು ಈ ಕುರಿತು ನೀಡಿದ ಅಭಿಪ್ರಾಯಗಳೇನು ಹಾಗು ಅವುಗಳನ್ನು ಸರ್ಕಾರ ಪರಿಗಣಿಸಿದೆಯೇ,

ಈ) ಇಲ್ಲವಾದಲ್ಲಿ ಕಾರಣಗಳೇನು,

ಉ) ಸ್ಥಳೀಯ ಜನರ ಸಮ್ಮತಿಯನ್ನು ಪಡೆಯುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು,

ಊ) ಸ್ಥಾವರಕ್ಕೆ ಬಳಸಿದ ನೀರು ಸಮುದ್ರಕ್ಕೆ ಸೇರದಂತೆ ಹಾಗೂ ಮೀನುಗಾರಿಕೆಯ ಕುರಿತಾಗಿ ಸರ್ಕಾರ ವಿಧಿಸಿರುವ ಮಾನದಂಡಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ರಾಜ್ಯವು ವಿದ್ಯುತ್ ಕೊರತೆಯಿಂದ ಬಳಲುತ್ತಿರುವುದರಿಂದ, ರಾಜ್ಯ ಸರ್ಕಾರವು ನಾರ್ಗಾಜುನ ಶಾಖೋತ್ಪನ್ನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ಸಂಪೂರ್ಣ ಬೆಂಬಲ ನೀಡುವುದು

ಆ) ಪರಿಸರಕ್ಕೆ ಮತ್ತು ಜನರಿಗೆ ಈ ಯೋಜನೆಯಿಂದಾಗುವ ಹಾನಿಯನ್ನು ತಡೆಯಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಪರಿಸರ ಮತ್ತು ಅರಣ್ಯ ಮಂತ್ರಾಲಯ, ಕೇಂದ್ರ ಸರ್ಕಾರದವರು ಈ

ಯೋಜನೆಗಳಿಗೆ ಅನುಮತಿ ನೀಡುವಾಗ ಪರಿಸರ ಸಂರಕ್ಷಣೆಗೆ ವಿಧಿಸಿರುವ ಶರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸರ್ಕಾರವು ನಾಗಾರ್ಜುನ ವಿದ್ಯುತ್ ನಿಗಮ ನಿಯಮಿತಕ್ಕೆ ಆದೇಶಿಸಿದೆ

ಇ) ಪರಿಸರ ತಜ್ಞರು ಮತ್ತು ಸ್ಥಳಿಯರು ಈ ಯೋಜನೆಯಿಂದ ಪರಿಸರಕ್ಕೆ ಹಾನಿಯಾಗುತ್ತದೆಂದು ಅಭಿಪ್ರಾಯ ಪಟ್ಟಿರುವರು ಮಾನ್ಯ ಮುಖ್ಯ ಮಂತ್ರಿಯವರು ಸ್ಥಳೀಯ ಲೋಕಸಭಾ ಸದಸ್ಯರು, ವಿಧಾನ ಸಭಾ/ವಿಧಾನ ಪರಿಷತ್ ಸದಸ್ಯರು ಮತ್ತು ಸ್ಥಳೀಯ ಮುಖಂಡರ ಸಭೆಯನ್ನು ಕರೆದು ರಾಜ್ಯದಲ್ಲಿ ವಿದ್ಯುತ್ ಕೊರತೆ ಇರುವುದರ ಬಗ್ಗೆ ಎಲ್ಲರಿಗೂ ತಿಳಿಸಿ ಹೇಳಿದ್ದಾರೆ ಮತ್ತು ಯೋಜನೆಯಿಂದ ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದೆಂದು ಭರವಸೆ ನೀಡಿರುವರು

ಈ) ಉದ್ಭವಿಸುವುದಿಲ್ಲ

ಉ) ಸ್ಥಳೀಯ ಜನರ ಸಮ್ಮತಿಯನ್ನು ಪಡೆಯಲು ಮೀನುಗಾರ ಮುಖಂಡರು ಮತ್ತು ಸ್ಥಳೀಯ ಜನರನ್ನು ಒಳಗೊಂಡಂತೆ ಸುಮಾರು 165 ಜನರ ತಂಡವನ್ನು ಎನ್ ಟಿ ಪಿ ಸಿ ಯವರು ಕಾರ್ಯಗತಗೊಳಿಸಿರುವ ಆಂಧ್ರಪ್ರದೇಶದ ಕರಾವಳಿಯಲ್ಲಿನ ಸಿಂಹಾದ್ರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರಕ್ಕೆ ಅಧ್ಯಯನ ಪ್ರವಾಸಕ್ಕೆ ಕರೆದುಕೊಂಡು ಹೋಗಲಾಗಿದೆ

ಊ) ಸ್ಥಾವರಕ್ಕೆ ಬಳಸಿದ ನೀರನ್ನು ಶುದ್ಧಿಕರಿಸಿ ಮತ್ತು ಮೀನುಗಾರಿಕೆಗೆ ಯಾವುದೇ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಪರಿಸರ ಮತ್ತು ಅರಣ್ಯ ಮಂತ್ರಾಲಯ, ಕೇಂದ್ರ ಸರ್ಕಾರದವರು ವಿಧಿಸಿರುವ ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಆದೇಶಿಸಿದೆ

377 (645) ಶ್ರೀ ಕೃಷ್ಣಾಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರತಿ ಜಿಲ್ಲೆಯಲ್ಲಿ ಕ್ರೀಡಾ ಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ, ಹಾಗೂ ಆ ಕುರಿತ ಯೋಜನೆಗಳನ್ನು ಸಿದ್ದಪಡಿಸಲಾಗಿದೆಯೇ
(ವಿವರಗಳನ್ನು ನೀಡುವುದು),

ಆ) ಹಾಗಿದ್ದಲ್ಲಿ ಈ ಯೋಜನೆಗಾಗಿ ನಿಗಧಿಪಡಿಸಿದ ಹಣದ ಮೊತ್ತ ಎಷ್ಟು,